ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ7(8)/ಆರ್.ಟಿ.ಇ/ಪ್ರ.ಪ್ರ.ಪೂ.ಸಿ18-19/01 /2017-18 ದಿನಾಂಕ: 16-12-2017

**: : ಸುತ್ತೋಲೆ : :**

ವಿಷಯ: 2018-19 ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆ-2009 ರ ಸೆಕ್ಷನ್ 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆಗೆ ಪೂರ್ವ ಸಿದ್ಧತೆ ಮಾಡಿಕೊಳ್ಳುವ ಕುರಿತು.

ಉಲ್ಲೇಖ: 1. ಉಚಿತ ಮತ್ತು ಕಡ್ಡಾಯ ಶಿಕ್ಷಣ ಮಕ್ಕಳ ಹಕ್ಕು ಕಾಯಿದೆ-2009.
2. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 51 ಪಿಜಿಸಿ 2016 ದಿನಾಂಕ: 08.02.2016
4. ಸರ್ಕಾರದ ಆದೇಶ ಸಂಖ್ಯೆ: ಇಡಿ 608 ಪಿಜಿಸಿ 2016 ದಿನಾಂಕ: 12.12.2016
5. ಸರ್ಕಾರದ ಆದೇಶ ಸಂಖ್ಯೆ: ಇಡಿ 204 ಪಿಜಿಸಿ 2017 ದಿನಾಂಕ: 04.03.2017

**********

2018-19 ನೇ ಸಾಲಿನಲ್ಲಿ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1) (ಸಿ) ಅಡಿ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕೆಳಕಾಣಿಸಿದ ಪೂರ್ವ ಸಿದ್ಧತೆ ಮಾಡಿಕೊಳ್ಳಲು ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಚಿಸಲಾಗಿದೆ. ನೆರೆಹೊರೆ ಶಾಲೆಗಳ ಪಟ್ಟಿಯನ್ನು ಅಪ್‌ಡೇಟ್ ಮಾಡಲು ತಂತ್ರಾಂಶವನ್ನು ಹಾಗೂ ಕೆಲವೇ ದಿನಗಳಲ್ಲಿ ಬಿಡುಗಡೆ ಮಾಡಲಾಗುವುದು.

1. 2017-18 ನೇ ಸಾಲಿನಲ್ಲಿ **ಆಧಾರ್ ಕಾರ್ಡ್ ಆಧಾರದ ಮೇಲೆ ಪಿನ್‌ಕೋಡ್** ಸಹಾಯದಿಂದ ಗುರುತಿಸಿದ ನೆರೆಹೊರೆಯಲ್ಲಿ ಯಾವುದಾದರೂ ಜನವಸತಿ ಪ್ರದೇಶ ಬಿಟ್ಟು ಹೋಗಿದ್ದಲ್ಲಿ, ಸೇರ್ಪಡೆ ಮಾಡುವುದು.
2. ಗ್ರಾಮೀಣ ಪ್ರದೇಶದ ಕಂದಾಯ ಗ್ರಾಮದಲ್ಲಿ ಮತ್ತು ನಗರ ಪ್ರದೇಶದಲ್ಲಿ ದಿನಾಂಕ: 04.03.2017 ರ ಸರ್ಕಾರಿ ಆದೇಶದಲ್ಲಿ ನೀಡಿರುವ ಮಾರ್ಗಸೂಚಿಯಂತೆ ನಗರ ಪ್ರದೇಶದ ವ್ಯಾಪ್ತಿಯ ಶಾಲೆಗಳಿಗೆ ನಿಗದಿಪಡಿಸಿದ ನೆರೆಹೊರೆಯನ್ನು ಮ್ಯಾಪ್/ಟ್ಯಾಗ್ ಮಾಡುವುದು.
3. ನೆರೆಹೊರೆಯ ಶಾಲೆಗಳ ಮತ್ತು ಜನವಸತಿ ಪ್ರದೇಶಗಳ ಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ ಆಕ್ಷೇಪಣೆಗಳಿದ್ದರೆ ಆಹ್ವಾನಿಸಿ ಅಂತಿಮ ಪಟ್ಟಿ ಪ್ರಕಟಿಸಲು ಸಿದ್ಧತೆ ಮಾಡಿಕೊಳ್ಳುವುದು.
4. ಅಲ್ಪಸಂಖ್ಯಾತ ಅನುದಾನರಹಿತ ಶಾಲೆಗಳ ಮಾಹಿತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ದೃಢೀಕರಿಸಲ್ಪಟ್ಟ ದಾಖಲೆಗಳನ್ನು ಕ್ರೋಢೀಕರಿಸಿ ಸಲ್ಲಿಸುವುದು. ಹಾಗೂ ಆ ಸದರಿ ಮಾಹಿತಿಯನ್ನು ತಂತ್ರಾಂಶದಲ್ಲಿ ಅಪ್‌ಡೇಟ್ ಮಾಡುವುದು.
5. ಅಲ್ಪಸಂಖ್ಯಾತ ಅನುದಾನಿತ ಶಾಲೆಗಳ ಮಾಹಿತಿಯನ್ನು ಪ್ರತ್ಯೇಕವಾಗಿ ಕ್ರೋಢೀಕರಿಸಿ ಸಲ್ಲಿಸುವುದು ಹಾಗೂ ಸದರಿ ಮಾಹಿತಿಯನ್ನು ತಂತ್ರಾಂಶದಲ್ಲಿ ಅಪ್‌ಡೇಟ್ ಮಾಡುವುದು.
6. ನ್ಯಾಯಾಲಯದ ಪ್ರಕರಣಗಳ ಪಟ್ಟಿ ಮಾಡುವುದು. ನ್ಯಾಯಾಲಯದಿಂದ ತಡೆಯಾಜ್ಞೆ ಪಡೆದ ಪ್ರಕರಣಗಳು ಹಾಗೂ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿ ಬಾಕಿ ಇದ್ದು, ದಾಖಲಾತಿ ನಿರಾಕರಣೆ ಮಾಡುತ್ತಿರುವ ಪ್ರಕರಣಗಳ ಮಾಹಿತಿ ತಾಲ್ಲೂಕುವಾರು ಕ್ರೋಢೀಕರಿಸಿ ವಿವರವಾದ ವರದಿ ಸಲ್ಲಿಸುವುದು.
7. 2017-18 ನೇ ಸಾಲಿನಲ್ಲಿ ಪ್ರಾರಂಭಿಕ ತರಗತಿಗಳಾದ ಎಲ್.ಕೆ.ಜಿ ಹಾಗೂ ಒಂದನೇ ತರಗತಿಯಲ್ಲಿ ದಾಖಲಾದ ಒಟ್ಟು ಮಕ್ಕಳ (ಸಾಮಾನ್ಯ ಹಾಗೂ ಆರ್.ಟಿ.ಇ) ಸಂಖ್ಯೆಯನ್ನು ದಿನಾಂಕ: 30.09.2017 ರಲ್ಲಿ ಇದ್ದಂತೆ ನಿಖರವಾಗಿ ಖಚಿತಪಡಿಸಿಕೊಂಡು ತಂತ್ರಾಂಶದಲ್ಲಿ ಅಪ್‌ಡೇಟ್ ಮಾಡಲು ಸಿದ್ಧತೆ ಮಾಡಿಕೊಳ್ಳುವುದು. ದಾಖಲಾತಿ ವಿವರಗಳನ್ನು ಪದೇ ಪದೇ ಬದಲಾಯಿಸಲು ಅವಕಾಶ ನೀಡುವುದಿಲ್ಲ. ನಿಖರವಾದ ಮಾಹಿತಿಯನ್ನು ಒದಗಿಸುವುದು ಆಯಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರ ಜಂಟಿ ಜವಾಬ್ದಾರಿಯಾಗಿರುತ್ತದೆ. ತಪ್ಪಿದಲ್ಲಿ ಮುಂದಿನ ಆಗು-ಹೋಗುಗಳಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು(ಆಡಳಿತ) ರವರನ್ನು ನೇರ ಹೊಣೆಗಾರರನ್ನಾಗಿಸಲಾಗುವುದು.
8. ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ವಿವರವಾದ ಮಾರ್ಗಸೂಚಿಯನ್ನು ಹಾಗೂ ವೇಳಾಪಟ್ಟಿಯನ್ನು ನಂತರ ನೀಡಲಾಗುವುದು.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)
16/12/17

ರವರಿಗೆ,

(1) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ
(2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು(ಆಡಳಿತ)) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ
(3) ಕಛೇರಿ ಪ್ರತಿ.